# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 671+672+674 |
| ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ ನಾರಾಯಣಸ್ವಾಮಿ |
| ಉತ್ತರಿಸುವ ದಿನಾಂಕ | : | 23.12.2022 |
| ಉತ್ತರಿಸುವ ಸಚಿವರು | : | ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ 2022-23ನೇ ಸಾಲಿನಲ್ಲಿ ವಿದ್ಯಾರ್ಥಿ ವೇತನಗಳನ್ನು ನೀಡಲು ನಿಗದಿಪಡಿಸಿ ಮಂಜೂರಾತಿ ಮಾಡಿದ ಹಣಕಾಸಿನ ವಿವರಗಳೇನು; ಹಾಗೂ ವಿದ್ಯಾರ್ಥಿಗಳಿಗೆ ನೀಡುವ ವಿದ್ಯಾರ್ಥಿವೇತನಗಳ ವಿವರಗಳೇನು? (ಮಾಹಿತಿಯನ್ನು ನೀಡುವುದು) | 2022-23ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಗಳನ್ನು ಮಂಜೂರಾತಿ ನೀಡಲು ನಿಗದಿಪಡಿಸಿದ ಅನುದಾನದ ವಿವರ ಈ ಕೆಳಕಂಡಂತಿದೆ |

(ರೂ.ಲಕ್ಷಗಳಲ್ಲಿ)

| ಕ್ರ ಸಂ | ಕಾರ್ಯಕ್ರಮ | ನಿಗಧಿಪಡಿಸಿದ ಅನುದಾನ | | |
|---|---|---|---|---|
| | | ರಾಜ್ಯ (ಶೇ.25) | ಕೇಂದ್ರ (ಶೇ.75) | ಒಟ್ಟು |
| 01 | ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (1 ರಿಂದ 8 ತರಗತಿ) | 5381.73 | 0.00 | 5381.73 |
| 02 | ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (9 ಮತ್ತು 10 ತರಗತಿ) | 433.38 | 1601.04 | 2034.42 |
| 03 | ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ | 3000.00 | 12124.50 | 15124.50 |
| | **ಒಟ್ಟು** | **8815.11** | **13725.54** | **22540.65** |

- 2022-23ನೇ ಸಾಲಿನ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕಾಗಿ ದಿನಾಂಕ:02.11.2022 ರಂದು ಅರ್ಜಿ ಸಲ್ಲಿಸಲು ಆಹ್ವಾನಿಸಲಾಗಿದ್ದು, ಈಗಾಗಲೇ 218545 ಆನ್‌ಲೈನ್ ಮೂಲಕ ಅರ್ಜಿಗಳು ಸ್ವೀಕೃತವಾಗಿರುತ್ತವೆ. ಈ ಪೈಕಿ 40494 ಅರ್ಜಿಗಳಿಗೆ ಅನುಮೋದನೆ ನೀಡಲಾಗಿದ್ದು, 1330 ಅರ್ಜಿಗಳಿಗೆ ಮಂಜೂರಾತಿ ನೀಡಿ ರೂ.15.29 ಲಕ್ಷಗಳು ಪಾವತಿಸಲಾಗಿರುತ್ತದೆ ಬಾಕಿ ಉಳಿದ ಅರ್ಜಿಗಳನ್ನು ಪರಿಶೀಲಿಸಿ ಮಂಜೂರಾತಿ ನೀಡಲು ಕ್ರಮವಹಿಸಲಾಗುತ್ತಿದೆ. ಪ್ರಸ್ತುತ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

- ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕಾಗಿ ದಿನಾಂಕ:20.10.2022ರಂದು ಅರ್ಜಿ ಆಹ್ವಾನಿಸಲಾಗಿದ್ದು, ಈಗಾಗಲೇ 32725 ಅರ್ಜಿಗಳು ಆನ್‌ಲೈನ್ ಮೂಲಕ ಸ್ವೀಕೃತಿಯಾಗಿದ್ದು, ಸದರಿ ಅರ್ಜಿಗಳನ್ನು ಪರಿಶೀಲಿಸಿ ಮಂಜೂರಾತಿ ನೀಡಲು ಕ್ರಮವಹಿಸಲಾಗುತ್ತಿದೆ. ಪ್ರಸ್ತುತ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ವಿವರಗಳನ್ನು ಅನುಬಂಧದಲ್ಲಿ ನೀಡಿದೆ.

| | | |
|---|---|---|
| ಆ) | ದಿನಾಂಕ:01.04.2022 ರಿಂದ ದಿನಾಂಕ:30.11.2022 ರವರೆಗೆ ಸರ್ಕಾರದಿಂದ ನೀಡಿರುವ ವಿದ್ಯಾರ್ಥಿವೇತನ ಎಷ್ಟು; (ಸಂಪೂರ್ಣ ಮಾಹಿತಿಗಳನ್ನು ನೀಡುವುದು) | 2021-22ನೇ ಸಾಲಿನ ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕಾಗಿ ಒಟ್ಟು 314609 ವಿದ್ಯಾರ್ಥಿಗಳಿಗೆ ಮಂಜೂರಾತಿ ನೀಡಿ ರೂ.3874.00 ಲಕ್ಷಗಳು ಪಾವತಿಸಲಾಗಿರುತ್ತದೆ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕಾಗಿ ಒಟ್ಟು 128631 ವಿದ್ಯಾರ್ಥಿಗಳಿಗೆ ಮಂಜೂರಾತಿ ನೀಡಿ ರೂ.13343.00 ಲಕ್ಷಗಳು ಪಾವತಿಸಲಾಗಿರುತ್ತದೆ.<br><br>ಈ ಪೈಕಿ 2021-22ನೇ ಸಾಲಿನ ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ/ನಂತರದ ವಿದ್ಯಾರ್ಥಿಗಳಿಗೆ ದಿನಾಂಕ:01.04.2022 ರಿಂದ ದಿನಾಂಕ:30.11.2022 ರವರೆಗೆ ಈ ಕೆಳಕಂಡಂತೆ ವಿದ್ಯಾರ್ಥಿವೇತನ ಪಾವತಿಸಲಾಗಿರುತ್ತದೆ.<br><br>➢ ಮೆಟ್ರಿಕ್ ಪೂರ್ವ 54698 ಅರ್ಜಿಗಳಿಗೆ ರೂ.861.32 ಲಕ್ಷಗಳು ಪಾವತಿಸಲಾಗಿರುತ್ತದೆ.<br><br>➢ ಮೆಟ್ರಿಕ್ ನಂತರದ 105351 ಅರ್ಜಿಗಳಿಗೆ ರೂ.9881.14 ಲಕ್ಷಗಳು ಪಾವತಿಸಲಾಗಿರುತ್ತದೆ.<br><br>2022-23ನೇ ಸಾಲಿನ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ದಿನಾಂಕ:02.11.2022 ರಿಂದ ಮೆಟ್ರಿಕ್ ಪೂರ್ವ ಹಾಗೂ ದಿನಾಂಕ:20.10.2022 ರಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕಾಗಿ ಆನಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಪ್ರಸ್ತುತ ಈ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.<br><br>• ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕಾಗಿ ಇದುವರೆಗೂ 218545 ಅರ್ಜಿಗಳು ಆನ್‌ಲೈನ್ ಮೂಲಕ ಸ್ವೀಕೃತಿಯಾಗಿರುತ್ತವೆ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕಾಗಿ 32725 ಅರ್ಜಿಗಳು ಸ್ವೀಕೃತಿಯಾಗಿದ್ದು, ಸದರಿ ಅರ್ಜಿಗಳಿಗೆ ಮಂಜೂರಾತಿ ನೀಡಲು ಕ್ರಮವಹಿಸಲಾಗುತ್ತಿದೆ. |
| ಇ) | ಸಾಮಾಜಿಕ ಮಾಧ್ಯಮಗಳಲ್ಲಿ, ಪತ್ರಿಕೆಗಳಲ್ಲಿ, ಟಿವಿ ಮಾಧ್ಯಮಗಳಲ್ಲಿ 2022-23ನೇ ಸಾಲಿನ ಎಲ್ಲಾ ವಿದ್ಯಾರ್ಥಿ ವೇತನಗಳನ್ನು ನಿಲ್ಲಿಸಿರುವ/ತಡೆಹಿಡಿದಿರುವ ಕುರಿತು ವರದಿಗಳು ಪ್ರಸಾರವಾಗುತ್ತಿದ್ದು, ಹಾಗೂ ಸಾರ್ವಜನಿಕರಿಂದ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? (ಸಂಪೂರ್ಣ ಮಾಹಿತಿ ನೀಡುವುದು) | ಬಂದಿದೆ.<br><br>2022-23ನೇ ಸಾಲಿನಲ್ಲಿ ರಾಜ್ಯ ಸರ್ಕಾರದಿಂದ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಂಜೂರಾತಿ ಕಾರ್ಯಕ್ರಮವನ್ನು ಸ್ಥಗಿತಗೊಳಿಸಿರುವುದಿಲ್ಲ.<br><br>ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕಾಗಿ ತಗಲುವ ಅನುದಾನವನ್ನು ಈ ಕೆಳಕಂಡಂತೆ ರಾಜ್ಯ /ಕೇಂದ್ರ ಸರ್ಕಾರದ ಮೂಲಕ ಭರಿಸಲಾಗುತ್ತಿದೆ.<br><br>➢ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ (1 ರಿಂದ 8ನೇ ತರಗತಿ) ಕಾರ್ಯಕ್ರಮವು ರಾಜ್ಯ ವಲಯ ಕಾರ್ಯಕ್ರಮವಾಗಿದ್ದು, ಶೇ.100 ರಷ್ಟು ಅನುದಾನವನ್ನು ರಾಜ್ಯ ವಲಯ ಕಾರ್ಯಕ್ರಮದಿಂದ ಭರಿಸಲಾಗುತ್ತಿದೆ.<br>➢ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ (9 ಮತ್ತು 10ನೇ ತರಗತಿಯ) ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಸದರಿ ಕಾರ್ಯಕ್ರಮಕ್ಕೆ ಕೇಂದ್ರದ ಪಾಲು ಶೇ.75 ಹಾಗೂ ರಾಜ್ಯದ ಪಾಲು ಶೇ.25 ರಷ್ಟು ಅನುದಾನ ಭರಿಸಲಾಗುತ್ತಿದೆ. |

| | | |
|---|---|---|
| | | ➢ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಸದರಿ ಕಾರ್ಯಕ್ರಮಕ್ಕೆ ಕೇಂದ್ರದ ಪಾಲು ಶೇ.75 ಹಾಗೂ ರಾಜ್ಯದ ಪಾಲು ಶೇ.25 ರಷ್ಟು ಅನುದಾನ ಭರಿಸಲಾಗುತ್ತಿದೆ. |

ಸಕಇ 511 ಎಸ್‌ಟಿಪಿ 2022

(ಬಿ. ಶ್ರೀರಾಮುಲು)
ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು

## ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:671+672+674ರ ಅನುಬಂಧ

ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಮುಂದುವರೆಯಲು ಉತ್ತೇಜನ ನೀಡುವ ಸಲುವಾಗಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಇಲಾಖಾ ವತಿಯಿಂದ ಅನುಷ್ಠಾನ ಮಾಡಲಾಗುತ್ತಿದೆ.

- ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ
- ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ

**ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (1ನೇ ತರಗತಿಯಿಂದ 8ನೇ ತರಗತಿ- ರಾಜ್ಯ ಸರ್ಕಾರ)**

1ನೇ ತರಗತಿಯಿಂದ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಸದರಿ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಪಡೆಯಲು ಅರ್ಹರಾಗಿರುತ್ತಾರೆ. ಸದರಿ ಕಾರ್ಯಕ್ರಮವನ್ನು ರಾಜ್ಯ ಸರ್ಕಾರ ಒದಗಿಸುವ ಅನುದಾನದಲ್ಲಿ ಅನುಷ್ಠಾನ ಮಾಡಲಾಗುವುದು.

**ಷರತ್ತುಗಳು:**

- ✓ ವಿದ್ಯಾರ್ಥಿಯು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು.
- ✓ ರಾಜ್ಯ ಸರ್ಕಾರ 1 ರಿಂದ 8ನೇ ತರಗತಿ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ರೂ. 6.00 ಲಕ್ಷಗಳಿಗೆ ನಿಗದಿಪಡಿಸಲಾಗಿದೆ.

ಅರ್ಹ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ತರಗತಿವಾರು ಈ ಕೆಳಕಂಡಂತೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನವನ್ನು ಇಲಾಖಾ ವತಿಯಿಂದ ಮಂಜೂರು ಮಾಡಲಾಗುತ್ತಿದೆ.

| ತರಗತಿ | ಬಾಲಕರು | ಬಾಲಕಿಯರು |
|---|---|---|
| 1 ರಿಂದ 5 | 1000/- | 1100/- |
| 6 ರಿಂದ 7 | 1150/- | 1250/- |
| 8ನೇ ತರಗತಿ | 1250/- | 1350/- |

**ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (9ನೇ ತರಗತಿ ಮತ್ತು 10 ನೇ ತರಗತಿ- ಕೇಂದ್ರ ಸರ್ಕಾರ)**

9ನೇ ತರಗತಿಯಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಸದರಿ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಪಡೆಯಲು ಅರ್ಹರಾಗಿರುತ್ತಾರೆ. ಸದರಿ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರ ಒದಗಿಸುವ ಅನುದಾನದಲ್ಲಿ ಅನುಷ್ಠಾನ ಮಾಡಲಾಗುವುದು.

**ಷರತ್ತುಗಳು:**

- ✓ ವಿದ್ಯಾರ್ಥಿಯು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು.
- ✓ ಕೇಂದ್ರ ಸರ್ಕಾರ 9 ಮತ್ತು 10 ನೇ ತರಗತಿ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ರೂ. 2.50 ಲಕ್ಷಗಳಿಗೆ ನಿಗದಿಪಡಿಸಲಾಗಿದೆ.

ಅರ್ಹ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ತರಗತಿವಾರು ಈ ಕೆಳಕಂಡಂತೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನವನ್ನು ಇಲಾಖಾ ವತಿಯಿಂದ ಮಂಜೂರು ಮಾಡಲಾಗುತ್ತಿದೆ.

| ತರಗತಿ | ಡೇ ಸ್ಕಾಲರ್ | ಹಾಸ್ಟೆಲರ್ |
|---|---|---|
| 9 ರಿಂದ 10 | 3,000/- | 6,250/- |

**ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ:**

ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಮುಂದುವರೆಯಲು ಉತ್ತೇಜನ ನೀಡುವ ಸಲುವಾಗಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಇಲಾಖಾ ವತಿಯಿಂದ ಅನುಷ್ಠಾನ ಮಾಡಲಾಗುತ್ತಿದೆ. ಸದರಿ ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಕಾರ್ಯಕ್ರಮವಾಗಿದ್ದು, ಕೇಂದ್ರ ಸರ್ಕಾರವು ಒದಗಿಸಿರುವ ಅನುದಾನದಲ್ಲಿ ಕಾರ್ಯಕ್ರಮ ಅನುಷ್ಠಾನ ಮಾಡಲಾಗುವುದು.

...2

- ರೂ. 2.50 ಲಕ್ಷ ಆದಾಯ ಮಿತಿಯಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿಯನ್ನು ಇಲಾಖೆಯಿಂದ ಭರಿಸಲಾಗುತ್ತಿದೆ.
- ರೂ. 2.50 ಲಕ್ಷದಿಂದ ರೂ. 10.00 ಲಕ್ಷವರೆಗಿನ ಆದಾಯ ಮಿತಿಯೊಳಗಿನ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ತಾಂತ್ರಿಕ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಯಿಂದ ಶೇಕಡ 50ರಷ್ಟು ಶುಲ್ಕ ವಿನಾಯಿತಿ ಮಾಡಲಾಗುತ್ತಿದೆ.

ಷರತ್ತುಗಳು:

- ✓ ವಿದ್ಯಾರ್ಥಿಯು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು.
- ✓ ಅರ್ಜಿ ಸಲ್ಲಿಸಲು ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ರೂ. 2.50 ಲಕ್ಷಗಳಿಗೆ ನಿಗದಿಪಡಿಸಲಾಗಿದೆ.

ಅರ್ಹ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಕೋರ್ಸುವಾರು ಕಾಲೇಜುಗಳಿಗೆ ಪಾವತಿಸಬೇಕಾದ ಮರುಪಾವತಿಸಲಾಗದ ಕಡ್ಡಾಯ ಶುಲ್ಕಗಳ ಜೊತೆಗೆ ನಿರ್ವಹಣಾ ಭತ್ಯೆಯನ್ನು ಇಲಾಖಾ ವತಿಯಿಂದ ಮಂಜೂರು ಮಾಡಲಾಗುತ್ತಿದೆ.

ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿ(2010) ರನ್ವಯ ಮೆಟ್ರಿಕ್ ನಂತರದ ಕೋರ್ಸುಗಳನ್ನು ವಿಂಗಡಿಸಿದ್ದು, ಈ ಕೆಳಕಂಡಂತೆ ನಿರ್ವಹಣಾ ವೆಚ್ಚವನ್ನು ಮಂಜೂರು ಮಾಡಲಾಗುವುದು.

| ಗುಂಪು | ಕೋರ್ಸ್ ಗಳು | ಡೇ-ಸ್ಕಾಲರ್ | ಹಾಸ್ಟೇಲರ್(ವಾರ್ಷಿಕ) | | |
|---|---|---|---|---|---|
| | | | ಕೇಂದ್ರ | ರಾಜ್ಯ | ಒಟ್ಟು |
| I | MBBS/ BE/All PG courses/ M.Phil / Phd etc | 6600/- | 14400/- | 6600/- | 21000/- |
| II | LLB/ Paramedical Nursing Course / B.Pharm/ Nursing Etc | 6360/- | 9840/- | 11160/- | 21000/- |
| III | BA/ B.Sc/ B.Com and all Degree courses | 3600/- | 6840/- | 14160/- | 21000/- |
| IV | PUC/ ITI/ DIPLOMA etc | 2760/- | 4560/- | 16440/- | 21000/- |

ಕೋರ್ಸುವಾರು ಸಂಬಂಧಪಟ್ಟ ಇಲಾಖೆ/ವಿಶ್ವವಿದ್ಯಾಲಯ/ಮಂಡಳಿಗಳು ನಿಗದಿಪಡಿಸಿರುವ ಮರುಪಾವತಿಸಲಾಗದ ಕಡ್ಡಾಯ ಶುಲ್ಕ (compulsory non reimbursable fee) ಗಳನ್ನು ನಿಯಮಾನುಸಾರ ಮಂಜೂರು ಮಾಡಲಾಗುತ್ತಿದೆ.

******